

ಅರುಣ ಪಿ. ಭಟ್ಟ


## ವಾರಭವಿಷ್ಯ: 04.07.2024ರಿಂದ 10.07.2024ರವರೆಗೆ




ಮಕ್ಕಳ ಮೇಲೆ ಗಮನಹರಿಸಿ, ಅವರ ಪರಿಸರವನ್ನು ಉತ್ತಮವಾಗಿಟ್ಟುಕೊಳ್ಳುವ ಮನಸ್ಥಿತಿಯನ್ನು ರೂಪಿಸುವುದು ಒಳ್ಳೆಯದು. ಶ್ರಮದ ಕೆಲಸಗಳಿಂದ ಸಾರ್ಥಕತೆಯ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜೊತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 05. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನೀವು ಮಾಡುವ ಕೆಲಸದಲ್ಲಿ ಉತ್ತಮ ಫಲಿತಾಂಶ ಹಾಗೂ ಆದಾಯ ವೃದ್ಧಿಯಾಗಲಿದೆ. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ. ನಿಮ್ಮ ನಡತೆಯು ಹೆಚ್ಚು ಪ್ರಶಂಸೆಗೆ ಒಳಪಡುವುದು. ಪರಿವಾರದವರಿಂದ ಸಂತಸ, ನೆಮ್ಮದಿ. ಶುಭದಿನ 06. ಆದಿತ್ಯ ಹೃದಯ ಪಠಿಸಿರಿ.





ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ. ಕೆಲಸದ ಸಮಯದಲ್ಲಿ ನೀವು ವಿಶೇಷ ಯಶಸ್ಸನ್ನು ಪಡೆಯುತ್ತೀರಿ. ಹಾಗೆಯೇ, ಒಬ್ಬ ಹಿರಿಯ ಅಧಿಕಾರಿ ನಿಮ್ಮನ್ನು ಬೆಂಬಲಿಸುತ್ತಾರೆ. ಶುಭದಿನ 08. ಸೌಂದರ್ಯ ಲಹರಿ ಪಠಿಸಿರಿ.





ಸಮಸ್ಯೆ ಪರಿಹಾರ ಹುಡುಕಿ ಮತ್ತು ಕೆಲವು ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ಬರುವಂತ ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆ ಕಂಡುಬರುತ್ತದೆ. ನಿಮ್ಮ ಬುದ್ಧಿ ಬಲದಿಂದ ಪದೋನ್ನತಿ ಸಿಗುವುದು. ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಚಿಂತನೆ ನಡೆಸುವಿರಿ. ಶುಭದಿನ 09. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ಧನ ನಷ್ಟ ಆಗುವ ಸಂಭವ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯದಂತೆ ಕಾಣಬಹುದು, ಎಲ್ಲರ ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ನಿಮ್ಮಲ್ಲಿ ಹೊಳೆಯುವ ಆಲೋಚನೆ ಉತ್ತಮ ಪರಿಕಲ್ಪನೆಯಾಗಿದ್ದು ಇದರಿಂದ ಅನುಕೂಲಗಳು ಕಾಣಸಿಗಲಿವೆ. ಹೊಸ ಕೌಶಲವನ್ನು ಕಲಿಯಲು ಪ್ರಯತ್ನಿಸುತ್ತೀರಿ. ಶುಭದಿನ 07. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ





ಹಿರಿಯರಿಗೆ ಗೌರವ ನೀಡುವುದು ಒಳ್ಳೆಯದು. ಉತ್ತಮ ಗಳಿಕೆ ಇದೆ. ನಿಮ್ಮ ದುಡುಕುತನ ದೊಡ್ಡ ಪೆಟ್ಟನ್ನು ನೀಡಬಹುದಾಗಿದೆ. ಮನಸ್ಸು ಮರ್ಕಟವಿದ್ದಂತೆ. ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಒಂದು ದೊಡ್ಡದಾದ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು. ಉದ್ಯೋಗದಲ್ಲಿ ಬದಲಾವಣೆ, ಬಡ್ತಿ ಸಂಭವ. ಶುಭದಿನ 09. ಹನುಮಾನ್ ಚಾಲಿಸ್ ಪಠಿಸಿರಿ.





ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ ಕಂಡುಬರುತ್ತದೆ. ಟೀಕಿಸುವಂತಹ ಜನರ ಕುರಿತು ಆತಂಕ ಪಡಬೇಕಾಗಿಲ್ಲ. ನಿಮ್ಮ ಸುತ್ತಮುತ್ತಲೇ ನಿಮ್ಮನ್ನು ಅಡ್ಡಹಾದಿಗೆ ಎಳೆಯುವವರು ಸಿಗುತ್ತಾರೆ. ಜನ ತ್ತಿರು ವರು. ಹಾಗಾಗಿ ನಿಮ್ಮ ಬಳಿ ಬರುವ ಜನರ ಬಗ್ಗೆ ಎಚ್ಚರದಿಂದಿರಿ. ಶುಭದಿನ 06. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.





ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗಳಿಗೆ ಹೋಗದಿರುವುದು ತುಂಬಾ ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನಗಳು ಕಂಡುಬರುತ್ತಾರೆ. ಮುಷ್ಟಿ ಕಾಳು ಚೆಲ್ಲಿ ಮೂಟೆ ಕಾಳನ್ನು ಪಡೆಯುವ ಯೋಚನೆ. ಅತಿಯಾದ ಮಾನಸಿಕ ಸಮಸ್ಯೆಯನ್ನು ದೂರವಿಡಿ. ಸಹೋದ್ಯೋಗಿಗಳ ಜೊತೆ ಯಶಸ್ಸಿನ ಗುಟ್ಟನ್ನು ಹಂಚಿಕೊಳ್ಳಬೇಡಿ. ಶುಭದಿನ 09. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.





ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ. ಸಂಬಂಧಿಕರ ಜೊತೆ ಅನಗತ್ಯ ವಿವಾದಗಳು ಏರ್ಪಡುತ್ತವೆ. ದೈಹಿಕ ಮತ್ತು ಮಾನಸಿಕ ಸಮತೋಲನವನ್ನು ಕಾಪಾಡಿಕೊಳ್ಳಿ. ಶುಭದಿನ 08. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಈ ವಾರ ಸಿದ್ಧತೆ ನಡೆಸುವುದು ಒಳ್ಳೆಯದು. ಪಶುಸಂಗೋಪನೆ, ಕೃಷಿ ಚಟುವಟಿಕೆಗಳಲ್ಲಿ ಉತ್ತಮವಾದ ಬೆಳವಣಿಗೆ ಕಂಡುಬರುತ್ತದೆ. ಆರ್ಥಿಕ ಸಹಕಾರಕ್ಕಾಗಿ ಆತ್ಮೀಯರ ಬಳಿ ಕೇಳುವ ಸಾಧ್ಯತೆ. ಅತ್ಯಂತ ಚುರುಕುತನದಿಂದ ಇದ್ದ ನೀವು ಆಲಸ್ಯತನ ತೋರುವುದರಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆಯನ್ನು ಅನುಭವಿಸಬೇಕಾಗುವುದು. ಶುಭದಿನ 10. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ. ಸಮಸ್ಯೆಗಳ ಸುಳಿವಿನಿಂದ ಹೊರಬರಲು ಪ್ರಯತ್ನ ಮೆಚ್ಚುವಂಥದ್ದು. ಮನೆಗೆ ನೆಂಟರಿಷ್ಟರ ಆಗಮನ ಸಾಧ್ಯತೆ. ಶುಭದಿನ 08. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿವೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತದೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ. ಹಣಕಾಸಿನ ವ್ಯವಹಾರದಲ್ಲಿ ನಿಮ್ಮ ನಿರ್ವಹಣೆ, ಸಾಮರ್ಥ್ಯ ಹೆಚ್ಚಲಿದೆ. ನಿಮ್ಮ ವಿಶಾಲ ಮನಸ್ಥಿತಿಯು ದೊಡ್ಡ ದೊಡ್ಡ ಕಾರ್ಯಗಳನ್ನು ಲೀಲಾಜಾಲವಾಗಿ ಮಾಡಿ ಮುಗಿಸುತ್ತದೆ. ಶುಭದಿನ 07. ವಿಷ್ಣು ಸಹಸ್ರನಾಮ ಮಾಡಿರಿ.